# Bangalore
# Regional News
# 20.02.2025 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ಮುಡಾ ಪ್ರಕರಣ: ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ತನಿಖಾ ವರದಿ ಸಲ್ಲಿಸಿದ ಲೋಕಾಯುಕ್ತ ಪೊಲೀಸರು
2. ಮಾರ್ಚ್ 3 ರಿಂದ 21ರವರೆಗೆ ರಾಜ್ಯ ವಿಧಾನಮಂಡಲದ ಬಜೆಟ್ ಅಧಿವೇಶನ – ವಿಧಾನಸಭಾಧ್ಯಕ್ಷ ಯು.ಟಿ. ಖಾದರ್
3. ರಾಜ್ಯದ 13 ಜಲಾಶಯಗಳಲ್ಲಿ 538.9 ಟಿಎಂಸಿ ನೀರು ಲಭ್ಯ – ಸಚಿವ ಕೃಷ್ಣ ಬೈರೇಗೌಡ
4. ಕೋಲಾರದ ವೇಮಗಲ್‌ನಲ್ಲಿ ಕ್ರೋನ್ಸ್ ಬಾಟ್ಲಿಂಗ್ ಯಂತ್ರಗಳ ಉತ್ಪಾದನಾ ಘಟಕದಿಂದ 550 ಮಂದಿಗೆ ಉದ್ಯೋಗ – ಸಚಿವ ಎಂ.ಬಿ. ಪಾಟೀಲ್

***************

ಮುಡಾ ಪ್ರಕರಣದಲ್ಲಿ ಲೋಕಾಯುಕ್ತ ಪೊಲೀಸರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕ್ಲೀನ್ ಚಿಟ್ ನೀಡಿದ್ದು, ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ತನಿಖಾ ವರದಿಯನ್ನು ಸಲ್ಲಿಸಿದ್ದಾರೆ.

82ನೇ ಸಿಟಿ ಸಿವಿಲ್ ನ್ಯಾಯಾಲಯದ ನ್ಯಾಯಾದೀಶರಾದ ಸಂತೋಷ್ ಗಜಾನನ ಭಟ್ ಅವರಿದ್ದ ನ್ಯಾಯಪೀಠಕ್ಕೆ ಇಂದು ಲೋಕಾಯುಕ್ತ ತನಿಖಾಧಿಕಾರಿ ಎಸ್.ಪಿ.ಉದೇಶ್, 11 ಸಾವಿರದ 200 ಸಾವಿರ ಪುಟಗಳ ವರದಿಯನ್ನು ಸಲ್ಲಿಸಿದ್ದಾರೆ.

ಸಾಕ್ಷ್ಯಾಧಾರಗಳ ಕೊರತೆಯಿಂದಾಗಿ ಲೋಕಾಯುಕ್ತ ಪೊಲೀಸರು ಬಿ ರಿಪೋರ್ಟ್ ಸಲ್ಲಿಸಿದ್ದಾರೆ. 50ಕ್ಕೂ ಹೆಚ್ಚು ಜನರ ಹೇಳಿಕೆಗಳನ್ನು ಪೊಲೀಸರು ದಾಖಲಿಸಿಕೊಂಡಿದ್ದಾರೆ. ಪ್ರಕರಣದಲ್ಲಿ ಯಾವುದೇ ಸಾಕ್ಷ್ಯಾಧಾರಗಳು ದೊರೆತಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಅವರ ಪತ್ನಿ ಪಾರ್ವತಿ, ಮಲ್ಲಿಕಾರ್ಜುನ ಸ್ವಾಮಿ ಮತ್ತು ದೇವರಾಜ್ ಅವರಿಗೆ ಕ್ಲೀನ್ ಚಿಟ್ ನೀಡಿದಂತಾಗಿದೆ.

ದೂರುದಾರ ಸ್ನೇಹಮಯಿ ಕೃಷ್ಣ ನೀಡಿದ್ದ ದೂರಿನಲ್ಲಿ ಯಾವುದೇ ಸಾಕ್ಷ್ಯವಿಲ್ಲ ಎಂದು ಲೋಕಾಯುಕ್ತ ಪೊಲೀಸರು ಸ್ಪಷ್ಟಪಡಿಸಿದ್ದಾರೆ. ಸದ್ಯ ಅಂತಿಮ ವರದಿ ಸಲ್ಲಿಕೆಯಾದರೂ ಪ್ರಕರಣದ ತನಿಖೆ ಮುಂದುವರೆಯಲಿದೆ. ಕ್ಲೀನ್ ಚಿಟ್ ನೀಡಿದ ನಾಲ್ವರನ್ನು ಹೊರತುಪಡಿಸಿ ಉಳಿದವರ ವಿರುದ್ಧ ಲೋಕಾಯುಕ್ತ ಪೊಲೀಸರು ತನಿಖೆ ಮುಂದುವರಿಸಲಿದ್ದಾರೆ.

***************

ಮುಡಾ ಪ್ರಕರಣವು ಬಿಜೆಪಿ ಹಾಗೂ ಜೆಡಿಎಸ್‌ನ ಕುತಂತ್ರವಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಬಿಜೆಪಿ ಮತ್ತು ಜೆಡಿಎಸ್‌ನವರು ರಾಜಕೀಯ ಪ್ರೇರಿತ ಆರೋಪ ಮಾಡಿದ್ದಾರೆ ಎಂದು ದೂರಿದರು.

ಯಾವ ದಾಖಲೆಯಲ್ಲೂ ಸಿದ್ದರಾಮಯ್ಯ ಅವರ ಸಹಿ ಇಲ್ಲದಿರುವಾಗ, ಅವರ ಪಾತ್ರ ಹೇಗೆ ಬರುತ್ತದೆ. ಆಸ್ತಿ ಕಳೆದುಕೊಂಡವರು ಪರಿಹಾರ ಕೇಳುವುದು ಸಹಜ. ನಮಗೆ ಇಂತಹುದೇ ಜಾಗದಲ್ಲಿ ನಿವೇಶನ ನೀಡಿ ಎಂದು ಅವರು ಎಲ್ಲಿಯೂ ಕೇಳಿಲ್ಲ. ಆದರೂ ಅನಗತ್ಯ ಗೊಂದಲ ಬೇಡ ಎಂದು ಅವರು ಈ ನಿವೇಶನಗಳನ್ನು ವಾಪಸ್ ನೀಡಿದ್ದಾರೆ. ಲೋಕಾಯುಕ್ತ ಸಂಸ್ಥೆ ತನ್ನ ಕರ್ತವ್ಯ ಮಾಡಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು.

***************

ದೆಹಲಿ ಪ್ರವಾಸದ ಸಂದರ್ಭದಲ್ಲಿ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಸೇರಿದಂತೆ ಯಾವುದೇ ರಾಜಕೀಯ ವಿಚಾರಗಳನ್ನು ಕಾಂಗ್ರೆಸ್ ಹೈಕಮಾಂಡ್ ಜೊತೆ ಚರ್ಚಿಸಿಲ್ಲ ಎಂದು ಗೃಹ ಸಚಿವ ಡಾ ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರೊಂದಿಗೆ ಮಾತನಾಡಿದ ಅವರು, ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಲೋಕಾಯುಕ್ತ ಕ್ಲೀನ್ ಚಿಟ್ ನೀಡಿರುವ ಬಗ್ಗೆ ಬಿಜೆಪಿ ನಾಯಕರು ಪ್ರಶ್ನಿಸುತ್ತಿದ್ದಾರೆ. ಲೋಕಾಯುಕ್ತ ತನಿಖೆಯನ್ನೇ ಪ್ರಶ್ನಿಸುವುದು ಎಷ್ಟರ ಮಟ್ಟಿಗೆ ಸರಿ ಎಂಬುದನ್ನು ಬಿಜೆಪಿ ನಾಯಕರು ಯೋಚಿಸಲಿ ಎಂದರು.

ಗೃಹಲಕ್ಷ್ಮೀ ಯೋಜನೆಯಲ್ಲಿನ ಸಮಸ್ಯೆಯನ್ನು ಮುಂದಿನ ದಿನಗಳಲ್ಲಿ ಸರಿಪಡಿಸಿಕೊಳ್ಳಲಾಗುವುದು ಎಂದು ಇದೇ ವೇಳೆ ಸಚಿವ ಡಾ ಜಿ.ಪರಮೇಶ್ವರ್ ತಿಳಿಸಿದ್ದಾರೆ.

***************

ಮಾರ್ಚ್ 3 ರಿಂದ 21 ರವರೆಗೆ ರಾಜ್ಯ ವಿಧಾನ ಮಂಡಲದ ಬಜೆಟ್ ಅಧಿವೇಶನ ನಡೆಯಲಿದೆ ಎಂದು ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಹೇಳಿದ್ದಾರೆ.

ದಾವಣಗೆರೆಯಲ್ಲಿಂದು ಸುದ್ದಿಗಾರರಿಗೆ ಈ ಕುರಿತು ಮಾಹಿತಿ ನೀಡಿದ ಅವರು, ಮಾರ್ಚ್ 3 ರಂದು ರಾಜ್ಯಪಾಲರು ಜಂಟಿ ಸದನ ಉದ್ದೇಶಿಸಿ ಮಾತನಾಡಲಿದ್ದು, ನಂತರ ಮೂರು ದಿನ ರಾಜ್ಯಪಾಲರ ಭಾಷಣದ ಮೇಲೆ ಚರ್ಚೆ ನಡೆಯಲಿದೆ. ಮಾರ್ಚ್ 7ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್ ಮಂಡನೆ ಮಾಡಲಿದ್ದಾರೆ ಎಂದು ತಿಳಿಸಿದರು.

***ಧ್ವನಿ****ಯು.ಟಿ. ಖಾದರ್

ಮೈಸೂರಿನ ಉದಯಗಿರಿಯಲ್ಲಿ ನಡೆದ ಕಲ್ಲು ತೂರಾಟ ಪ್ರಕರಣ ಕುರಿತ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಯು.ಟಿ.ಖಾದರ್, ಈ ರೀತಿಯ ಪ್ರಕರಣ ಎಲ್ಲೂ ನಡೆಯಬಾರದು. ಸಾಮಾಜಿಕ ಮಾಧ್ಯಮಗಳ ದುರ್ಬಳಕೆ ಕೂಡ ಆಗಬಾರದು ಎಂದು ಹೇಳಿದರು.

***************

ಕಂದಾಯ ಸಚಿವ ಕೃಷ್ಣ ಬೈರೇಗೌಡ ಅಧ್ಯಕ್ಷತೆಯಲ್ಲಿ ಬೆಂಗಳೂರಿನ ವಿಧಾನಸೌಧದಲ್ಲಿಂದು ಹಿಂಗಾರು–ಮುಂಗಾರು ಮಳೆ, ಕೃಷಿ, ಕುಡಿಯುವ ನೀರು, ಹವಾಮಾನ ಹಾಗೂ ಅಣೆಕಟ್ಟೆಗಳಲ್ಲಿನ ನೀರಿನ ಮಟ್ಟದ ಕುರಿತು ಸಚಿವ ಸಂಪುಟ ಉಪ ಸಮಿತಿ ಸಭೆ ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಕೃಷ್ಣ ಬೈರೇಗೌಡ, ಈ ಬಾರಿ ಮಾರ್ಚ್ ಕೊನೆಯ ವಾರದಲ್ಲಿ ಮಳೆಯಾಗುವ ಸಾಧ್ಯತೆ ಇದೆ. ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ವಾಡಿಕೆಗಿಂತ ಅಧಿಕ ಮಳೆಯಾಗುವ ನಿರೀಕ್ಷೆ ಇದೆ. ಅಲ್ಲದೇ, ಅಕ್ಟೋಬರ್, ನವೆಂಬರ್, ಡಿಸೆಂಬರ್‌ನಲ್ಲಿ ಕಡಿಮೆ ಮಳೆಯಾಗಲಿದ್ದು, ಪೂರ್ವ ಮುಂಗಾರಿನಲ್ಲಿ ಮಳೆ ಅಧಿಕವಾಗುವ ಸಾಧ್ಯತೆ ಇದೆ ಎಂದು ಹೇಳಿದರು.

ಈ ಬಾರಿ ಫೆಬ್ರವರಿ ತಿಂಗಳಲ್ಲಿ ವಾಡಿಕೆಗಿಂತ 2.5 ಡಿಗ್ರಿ ಸೆಲ್ಸಿಯಸ್ ನಷ್ಟು ಬಿಸಿಲು ಅಧಿಕವಾಗಿದೆ. ಈ ಹಿನ್ನೆಲೆಯಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ಕ್ರಮ ವಹಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

ರಾಜ್ಯದ 13 ಜಲಾಶಯಗಳಲ್ಲಿ 538.9 ಟಿಎಂಸಿ ನೀರು ಲಭ್ಯವಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ 333.8 ಟಿಎಂಸಿ ನೀರು ಮಾತ್ರ ಲಭ್ಯವಿತ್ತು ಎಂದು ಸಚಿವ ಕೃಷ್ಣಬೈರೇಗೌಡ ಮಾಹಿತಿ ನೀಡಿದರು.

ಸಭೆಯಲ್ಲಿ ಕೃಷಿ ಸಚಿವ ಚೆಲುವರಾಯಸ್ವಾಮಿ, ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ, ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

***************

ಜರ್ಮನಿ ಮೂಲದ ಪ್ರತಿಷ್ಠಿತ ಕ್ರೋನ್ಸ್ ಕಂಪನಿಯು ಕೋಲಾರ ಜಿಲ್ಲೆಯ ವೇಮಗಲ್ ಕೈಗಾರಿಕಾ ಪ್ರದೇಶದಲ್ಲಿ 315 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಿರುವ ಬಾಟ್ಲಿಂಗ್ ಯಂತ್ರಗಳ ಉತ್ಪಾದನಾ ಘಟಕಕ್ಕೆ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಇಂದು ಭೂಮಿಪೂಜೆ ನೆರವೇರಿಸಿದರು.

ಬಳಿಕ ಮಾತನಾಡಿದ ಸಚಿವರು, ಕೈಗಾರಿಕಾ ಅಗತ್ಯಗಳಿಗೆ ಬೇಕಾಗುವ ಬಾಟ್ಲಿಂಗ್ ಮತ್ತು ಶುದ್ಧೀಕರಣ ಸಾಧನಗಳ ತಯಾರಿಕೆಗೆ ದೇಶದಲ್ಲಿ ಅಪಾರ ಬೇಡಿಕೆ ಇದೆ. ಇದನ್ನು ಮನಗಂಡು ಕ್ರೋನ್ಸ್, ರಾಜ್ಯದಲ್ಲಿ ಈ ಘಟಕ ಆರಂಭಿಸಲು ಮುಂದಾಗಿದೆ. ಇದರಿಂದ ಬಂಡವಾಳ ಹೂಡಿಕೆಯ ಜತೆಗೆ ಸ್ಥಳೀಯರಿಗೆ ಉದ್ಯೋಗ ಸೃಷ್ಟಿಯೂ ಆಗಲಿದೆ ಎಂದರು.

ಹಂತ–ಹಂತವಾಗಿ ಕಂಪನಿಯು 315 ಕೋಟಿ ರೂಪಾಯಿ ಹೂಡಿಕೆ ಮಾಡಲಿದೆ. ಇದರಿಂದ 550 ಮಂದಿಗೆ ಉದ್ಯೋಗ ಸಿಗಲಿದೆ. ನಿಮಿಷಕ್ಕೆ ನೂರಾರು ಬಾಟಲಿ ಉತ್ಪಾದಿಸುವ ಯಂತ್ರಗಳನ್ನು ಇಲ್ಲಿ ಉತ್ಪಾದಿಸಲಾಗುತ್ತದೆ ಎಂದು ಅವರು ಮಾಹಿತಿ ನೀಡಿದರು.

ಧ್ವನಿ: ಸಚಿವ ಎಂ.ಬಿ.ಪಾಟೀಲ್

ಸ್ಥಳೀಯ ಹಾಗೂ ಭೂಮಿ ಕಳೆದುಕೊಂಡ ರೈತರ ಮಕ್ಕಳಿಗೆ ಉದ್ಯೋಗ ನೀಡಬೇಕೆಂದು ಸಚಿವ ಎಂ.ಬಿ.ಪಾಟೀಲ್ ಇದೇ ವೇಳೆ ಕ್ರೋನ್ಸ್ ಕಂಪನಿಯ ಪ್ರತಿನಿಧಿಗಳಿಗೆ ಮನವಿ ಮಾಡಿದರು.

***************

ವಿಪತ್ತು ಸಂಭವಿಸಿದ್ದಲ್ಲಿ ಅದನ್ನು ಸಮರ್ಪಕವಾಗಿ ಎದುರಿಸಲು ಅಧಿಕಾರಿಗಳು ತಮ್ಮ ಇಲಾಖೆ ವ್ಯಾಪ್ತಿಯಲ್ಲಿ ಅಗತ್ಯ ಸಿದ್ಧತೆಗಳನ್ನು ಮಾಡಬೇಕು ಎಂದು ಉತ್ತರ ಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಸೂಚನೆ ನೀಡಿದ್ದಾರೆ.
ಕೈಗಾದಲ್ಲಿ ನಡೆಯುವ ವಿಪತ್ತು ನಿರ್ವಹಣಾ ಅಣುಕು ಕಾರ್ಯಾಚರಣೆ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ನಡೆದ ಸಮನ್ವಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.
ಕೈಗಾದ ವೈಜ್ಞಾನಿಕ ಅಧಿಕಾರಿ ಚಿತ್ತರಂಜನ್ ಮಾತನಾಡಿ, ಕೈಗಾದಲ್ಲಿ ಪ್ರಸ್ತುತ 4 ಅಣು ವಿದ್ಯುತ್ ಘಟಕಗಳು ಕಾರ್ಯನಿರ್ವಹಿಸುತ್ತಿದ್ದು, 5 ಮತ್ತು 6ನೇ ಘಟಕ ಇನ್ನೂ ಕಾರ್ಯಾರಂಭ ಮಾಡಬೇಕಿದೆ.

***************

ಸ್ವಾಭಾವಿಕ ಸಂಪನ್ಮೂಲಗಳ ಹಂಚಿಕೆ, ಬಡತನ, ಮೂಲಸೌಕರ್ಯ, ಲಿಂಗ ಅಸಮಾನತೆ, ನಿರುದ್ಯೋಗ, ಮಾನವ ಹಕ್ಕುಗಳು ಮತ್ತು ಸಾಮಾಜಿಕ ರಕ್ಷಣೆಗಳಂತಹ ಸಮಸ್ಯೆಗಳನ್ನು ನಿಭಾಯಿಸುವ ಮೂಲಕ ವಿಶ್ವದ ಎಲ್ಲಾ ಜನರಿಗೆ ಸಮಾನ ನ್ಯಾಯ ಒದಗಿಸುವಲ್ಲಿ ಈ ದಿನಾಚರಣೆ ಮಹತ್ವದ್ದಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಬೋಲಾ ಪಂಡಿತ್ ಹೇಳಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾನೂನು ಸೇವಾ ಸಮಿತಿ ವತಿಯಿಂದ ದೊಡ್ಡಬಳ್ಳಾಪುರದಲ್ಲಿ ಇಂದು ವಿಶ್ವ ಸಾಮಾಜಿಕ ನ್ಯಾಯ ದಿನಾಚರಣೆ, ಕಾನೂನು ಅರಿವು ನೆರವು ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಾಮಾಜಿಕ ನ್ಯಾಯವನ್ನು ಉತ್ತೇಜಿಸುವ ಅಗತ್ಯವನ್ನು ಗುರುತಿಸಲು ವಿಶ್ವಸಂಸ್ಥೆಯು ವಿಶ್ವ ಸಾಮಾಜಿಕ ನ್ಯಾಯ ದಿನಾಚರಣೆಯನ್ನು ಆರಂಭಿಸಿದೆ ಎಂದರು.

***************

<u>ಸಂಕ್ಷಿಪ್ತ ಸುದ್ದಿ</u>

1. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಸಾಲ ಮರು ಪಾವತಿಗೆ ಸಣ್ಣ ಹಣಕಾಸು ಸಂಸ್ಥೆಗಳು ಕಿರುಕುಳ ನೀಡಿದರೆ, ಕೂಡಲೇ ತುರ್ತು ಸಹಾಯವಾಣಿ ಸಂಖ್ಯೆ 112 ಗೆ ಕರೆ ಮಾಡಬಹುದು ಅಥವಾ ಸ್ಥಳೀಯ ಪೊಲೀಸ್ ಠಾಣೆಗೆ ದೂರು ನೀಡಬಹುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ ತಿಳಿಸಿದ್ದಾರೆ.
2. ಬೀದರ್ ಜಿಲ್ಲೆಯ ಭಾಲ್ಕಿ ತಾಲೂಕಿನ ಲಂಜವಾಡ ಗ್ರಾಮದಲ್ಲಿ ರಾಜೀವ ಗಾಂಧಿ ವಸತಿ ನಿಗಮ, ಜಿಲ್ಲಾಡಳಿತ ಮತ್ತ ಜಿಲ್ಲಾ ಪಂಚಾಯತ್ ವತಿಯಿಂದ 'ಆವಾಸ್ ಪ್ಲಸ್ ಆ್ಯಪ್ ಮೂಲಕ ವಸತಿ, ನಿವೇಶನ ರಹಿತರ ಸಮೀಕ್ಷೆಗೆ ಚಾಲನೆ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಬಸವ ವಸತಿ ಯೋಜನೆ ಫಲಾನುಭವಿಗಳಿಗೆ ತಿಳುವಳಿ ಪತ್ರ ವಿತರಣೆ ಕಾರ್ಯಕ್ರಮವನ್ನು ಸಂಸದ ಸಾಗರ ಈಶ್ವರ ಖಂಡ್ರೆ ಇಂದು ಉದ್ಘಾಟಿಸಿದರು.
3. ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಗಳಾದ ಪಂಚ ಗ್ಯಾರಂಟಿ ಯೋಜನೆಗಳಡಿ ಶೇಕಡ 100ರಷ್ಟು ಪ್ರಗತಿ ಸಾಧಿಸುವಂತೆ ಪಂಚ ಗ್ಯಾರಂಟಿ ಯೋಜನೆಗಳ ಯಾದಗಿರಿ ಜಿಲ್ಲಾ ಅನುಷ್ಠಾನ ಸಮಿತಿ ಅಧ್ಯಕ್ಷ ಶ್ರೇಣಿಕ ಕುಮಾರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.
4. ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು ಹಾಗೂ ಆಕಾಶವಾಣಿ ಎ ಗ್ರೇಡ್ ಸಂಗೀತ ಕಲಾವಿದರಾಗಿದ್ದ ಶೋಭಾ ರಾಘವೇಂದ್ರ ಹೂಯಿಲಗೋಳ ಅವರು ವಯೋಸಹಜ ಕಾಯಿಲೆಯಿಂದ ಇಂದು ನಿಧನರಾದರು. ಅವರಿಗೆ 81 ವರ್ಷ ವಯಸ್ಸಾಗಿತ್ತು. ಅವರ ನಿಧನಕ್ಕೆ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಸೇರಿದಂತೆ ಹಲವಾರು ಗಣ್ಯರು ಸಂತಾಪ ಸೂಚಿಸಿದ್ದಾರೆ.

********ಮುಕ್ತಾಯ*******